2640
7-11-2016

3-11-16

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 04 ರಾಐಸ 2016

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:19.10.2016.

**ಸುತ್ತೋಲೆ**

ವಿಷಯ: ದಿನಾಂಕ 19.11.2016ರಿಂದ 25.11.2016ರವರೆಗೆ ರಾಜ್ಯಾದ್ಯಂತ "ರಾಷ್ಟ್ರೀಯ ಐಕ್ಯತಾ ಸಪ್ತಾಹ" ವನ್ನು ಆಚರಿಸುವ ಬಗ್ಗೆ.

*****

ಪ್ರತಿ ವರ್ಷದಂತೆ ಕೇಂದ್ರ ಸರ್ಕಾರದ ಸೂಚನೆಯನ್ವಯ, ರಾಜ್ಯದಾದ್ಯಂತ ದಿನಾಂಕ 19.11.2016ರಿಂದ 25.11.2016ರವರೆಗೆ **"ರಾಷ್ಟ್ರೀಯ ಐಕ್ಯತಾ ಸಪ್ತಾಹ"** ವನ್ನು ಆಚರಿಸಬೇಕೆಂದು ರಾಜ್ಯ ಸರ್ಕಾರವು ನಿರ್ಧರಿಸಿದೆ. ಅದರಂತೆ, ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಬಲಪಡಿಸಲು, ದೇಶದಲ್ಲಿ ಹೆಚ್ಚುತ್ತಿರುವ ಹಿಂಸಾಚಾರ ಮತ್ತು ಕೋಮು ದ್ವೇಷವನ್ನು ತಡೆಗಟ್ಟುವುದಕ್ಕಾಗಿ ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಕೋರಲಾಗಿದೆ. ಈ ಸಪ್ತಾಹದ ಅಂಗವಾಗಿ ವಾರವಿಡಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ವಿವರಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದೆ. ಕಳೆದ ವರ್ಷಗಳಂತೆ, ಕಾರ್ಯಕ್ರಮಗಳನ್ನು ನಡೆಸುವಾಗ, ರಾಷ್ಟ್ರೀಯ ಭಾವೈಕ್ಯತಾ ಚಿಹ್ನೆಯನ್ನು ವೇದಿಕೆಯ ಮೇಲೆ ಪ್ರಮುಖವಾಗಿ ಪ್ರದರ್ಶನ ಮಾಡುವಂತೆ ಕ್ರಮ ತೆಗೆದುಕೊಳ್ಳಬೇಕು.

ಈ ಸಪ್ತಾಹವನ್ನು ಆಚರಿಸುವಾಗ, ಸಾರ್ವಜನಿಕರನ್ನು ಮತ್ತು ಸ್ವಯಂ ಸೇವಾ ಸಂಸ್ಥೆಗಳನ್ನು ಭಾಗಿಗಳನ್ನಾಗಿ ಮಾಡಿಕೊಂಡಲ್ಲಿ, ಈ ಕಾರ್ಯಕ್ರಮವು ಹೆಚ್ಚು ಯಶಸ್ವಿಯಾಗುತ್ತದೆ. ದಿನಾಂಕ 19.11.2016 ರ ಶನಿವಾರದಂದು, ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನವನ್ನು ಎಲ್ಲಾ ಸರ್ಕಾರದ ಕಛೇರಿಗಳಲ್ಲಿ ಸ್ವೀಕರಿಸಬೇಕಾಗಿ ಸೂಚಿಸಲಾಗಿದೆ. ಪ್ರಮಾಣ ವಚನದ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದೆ. ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ಆಚರಿಸಿದ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜಕೀಯ) (ನಂ.360, 3ನೇ ಮಹಡಿ, ವಿಧಾನ ಸೌಧ)ಗೆ ವರದಿಯೊಂದನ್ನು ಕಳುಹಿಸುವಂತೆ ಕೋರಲಾಗಿದೆ.

ಕೆ. ಎಸ್. ರೋಹಿಣಿ
(ಕೆ.ಎಸ್. ರೋಹಿಣಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ರಾಜಕೀಯ)

JRN /16

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/47/ಸುತ್ತೋಲೆ/2016-17

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:10/11/2016

ದಿನಾಂಕ: 19.11.2016 ರಿಂದ 25.11.2016 ರವರೆಗೆ ರಾಜ್ಯಾದ್ಯಂತ **"ರಾಷ್ಟ್ರೀಯ ಐಕ್ಯತಾ ಸಪ್ತಾಹ"** ವನ್ನು ಆಚರಿಸುವ ಬಗ್ಗೆ ಹೊರಡಿಸಿರುವ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/04/ರಾಐಸ/2016 ಬೆಂಗಳೂರು, ದಿನಾಂಕ:19.10.2016 ನ್ನು ಕೆಳಕಂಡವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ,

ಮಂಗಳೂರು, ಧಾರವಾಡ, ಗುಲಬರ್ಗಾ-ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳು ಅಗತ್ಯ ಕ್ರಮಕೈಗೊಳ್ಳಲು ತಿಳಿಸುವಂತೆ ಸೂಚಿಸಲಾಗಿದೆ.

2. ರಾಜ್ಯದ ಎಲ್ಲಾ ಸರ್ಕಾರಿ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.

3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು, ರವರು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಲಾಗಿದೆ.

ಪ್ರತಿ:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
2) ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
3) ಕಛೇರಿ ಪ್ರತಿ

# ದಿನಾಂಕ 19.11.2016ರಿಂದ 25.11.2016ರವರೆಗೆ

## ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳ ವಿವರ

ದಿನಾಂಕ 19.11.2016 ಶನಿವಾರ

**"ರಾಷ್ಟ್ರೀಯ ಐಕ್ಯತಾ ದಿನ"**

ಅಹಿಂಸೆ, ಕೋಮು ಸೌಹಾರ್ದತೆ, ಜಾತ್ಯಾತೀತತೆ, ಈ ವಿಷಯಗಳ ಬಗ್ಗೆ ಸಭೆಗಳನ್ನು ಹಾಗೂ ವಿಚಾರ ಸಂಕಿರಣಗಳನ್ನು ಏರ್ಪಡಿಸುವುದು.

ದಿನಾಂಕ 20.11.2016 ಭಾನುವಾರ

**"ಅಲ್ಪ ಸಂಖ್ಯಾತರ ಕಲ್ಯಾಣ ದಿನ"**

ಅಲ್ಪ ಸಂಖ್ಯಾತರ ಅಭಿವೃದ್ಧಿಗಾಗಿ ರೂಪಿಸಿರುವ 15 ಅಂಶಗಳ ಕಾರ್ಯಕಮಗಳ ಅನುಷ್ಠಾನಕ್ಕೆ ಪ್ರಯತ್ನಿಸುವುದು ಮತ್ತು ಕೋಮು ಗಲಭೆ ಪೀಡಿತ ಪ್ರದೇಶಗಳಲ್ಲಿ ಭ್ರಾತೃತ್ವ ಭಾವನೆ ಬೆಳೆಸುವಂತೆ ಮೆರವಣಿಗೆಗಳನ್ನು ಏರ್ಪಡಿಸುವುದು.

ದಿನಾಂಕ 21.11.2016 ಸೋಮವಾರ

**"ಭಾಷಾ ಸೌಹಾರ್ದತಾ ದಿನ"**

ಭಾರತದ ಇತರ ಪ್ರದೇಶಗಳ ಭಾಷಾ ಪರಂಪರೆಯನ್ನು ಮತ್ತೊಂದು ಪ್ರದೇಶದ ಜನತೆಗೆ ತಿಳಿ ಹೇಳುವ ಸಲುವಾಗಿ ವಿಶೇಷ ಸಾಹಿತ್ಯಕ ಸಮಾರಂಭ ಮತ್ತು ಕವಿ ಸಮ್ಮೇಳನಗಳನ್ನು ಏರ್ಪಡಿಸುವುದು.

ದಿನಾಂಕ 22.11.2016 ಮಂಗಳವಾರ

**"ದುರ್ಬಲ ವರ್ಗಗಳ ದಿನ"**

ಭೂಹೀನ ಕೃಷಿ ಕಾರ್ಮಿಕರಿಗೆ ಹೆಚ್ಚುವರಿ ಜಮೀನು ಮಂಜೂರಾತಿ ಕಾರ್ಯಕ್ರಮ ಸೇರಿದಂತೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ದುರ್ಬಲ ವರ್ಗಗಳ ಅಭಿವೃದ್ಧಿಗೆ ಸರ್ಕಾರ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳನ್ನು ಎತ್ತಿ ತೋರಿಸುವಂತೆ ಸಭೆ ಮತ್ತು ಮೆರವಣಿಗೆಗಳನ್ನು ಏರ್ಪಡಿಸುವುದು.

ದಿನಾಂಕ 23.11.2016 ಬುಧವಾರ

**"ಸಾಂಸ್ಕೃತಿಕ ಏಕತಾ ದಿನ"**

ಭಾರತೀಯ ಪರಂಪರೆಯಾದ ವಿವಿಧತೆಯಲ್ಲಿ ಏಕತೆಯನ್ನು ಪ್ರತಿಬಿಂಬಿಸುವಂತಹ ಸಂಸ್ಕೃತಿ ಮತ್ತು ಐಕ್ಯತೆಯನ್ನು ಸಂರಕ್ಷಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು.

ದಿನಾಂಕ 24.11.2016 ಗುರುವಾರ

**"ಮಹಿಳಾ ದಿನ"**

ಭಾರತೀಯ ಸಮಾಜದಲ್ಲಿ ಮಹಿಳೆಯರ ಪ್ರಾಮುಖ್ಯತೆ ರಾಷ್ಟ್ರ ನಿರ್ಮಾಣ ಹಾಗೂ ಪ್ರಗತಿಯಲ್ಲಿ ಅವರ ಪಾತ್ರವನ್ನು ಎತ್ತಿ ತೋರಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು.

ದಿನಾಂಕ 25.11.2016 ಶುಕ್ರವಾರ

**"ಪರಿಸರ ರಕ್ಷಣಾ ದಿನ"**

ಜನ ಸಾಮಾನ್ಯರಿಗೆ ಪರಿಸರದ ಬಗ್ಗೆ ಹಾಗೂ ಅದನ್ನು ಉಳಿಸಿ ಬೆಳೆಸಲು ತಿಳುವಳಿಕೆ ಹೇಳುವ ಸಭೆ ಸಮಾರಂಭಗಳನ್ನು ಏರ್ಪಡಿಸುವುದು.

# ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ

"ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಸಂರಕ್ಷಿಸಲು ಮತ್ತು ಬಲಪಡಿಸಲು ಅರ್ಪಣಾ ಮನೋಭಾವದಿಂದ ಕೆಲಸ ಮಾಡುತ್ತೇನೆಂದು ನಾನು ಶ್ರದ್ಧಾಪೂರ್ವಕವಾಗಿ ಪ್ರಮಾಣ ಮಾಡುತ್ತೇನೆ."

"ಅಲ್ಲದೆ ನಾನು ಎಂದಿಗೂ ಹಿಂಸಾಚಾರದಲ್ಲಿ ತೊಡಗುವುದಿಲ್ಲವೆಂದು ಮತ್ತು ಮತ, ಭಾಷೆ, ಪ್ರದೇಶ ಅಥವಾ ಇತರ ರಾಜಕೀಯ ಅಥವಾ ಆರ್ಥಿಕ ಕುಂದು ಕೊರತೆಗಳ ಬಗೆಗಿನ ಭಿನ್ನಾಭಿಪ್ರಾಯಗಳನ್ನು ಮತ್ತು ವಿವಾದಗಳನ್ನು ಶಾಂತಿಯುತವಾಗಿ ಹಾಗೂ ಸಂವಿಧಾನಾತ್ಮಕ ರೀತಿಯಲ್ಲಿ ಬಗೆಹರಿಸಿಕೊಳ್ಳುವ ದಿಸೆಯಲ್ಲಿ ನನ್ನ ಪ್ರಯತ್ನವನ್ನು ಮುಂದುವರೆಸುತ್ತೇನೆಂದೂ ಪ್ರಮಾಣ ಮಾಡುತ್ತೇನೆ."



# NATIONAL INTEGRATION

**The Concept**

This symbol for National Integration uses graphically stylized human elements joining hands in a circle. The circle of human elements is super-imposed on seven petals of a flower to symbolize harmony between nature and human beings. The repetition of the two motifs creates movement and rhythm, and expresses the essence of the idea of unity - Ekta. The colours are orange and green against white to symbolize the National Flag

Designed by : Benoy Sarkar